# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಎಸ್. ಅನಿಲಮ್ಮ, ಹಿಂದಿನ ಅಧ್ಯಕ್ಷರು, ವಿ.ವಿ ಪುರ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ಆ(9):ಮಗಾರಾಗ್ರಾಉಖಾಯೋ/ಸಿಆರ್-34/2019-20 ದಿನಾಂಕ:17.06.2019
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/41/2019-20, ದಿನಾಂಕ:04.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರು ಶ್ರೀಮತಿ ಎಸ್. ಅನಿಲಮ್ಮ, ಹಿಂದಿನ ಅಧ್ಯಕ್ಷರು, ವಿ.ವಿ ಪುರ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ರವರಿಗೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ವಿಚಾರಣಾ ವರದಿಯಲ್ಲಿ, ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ಇವರು ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲ್ಲೂಕು, ವಿ.ವಿ. ಪುರ ಗ್ರಾಮ ಪಂಚಾಯತಿ ಹಿಂದಿನ ಅಧ್ಯಕ್ಷರಾದ ಶ್ರೀಮತಿ ಎಸ್. ಅನಿಲಮ್ಮರವರು 2018-19ನೇ ಸಾಲಿನ ನರೇಗಾ ಯೋಜನೆಯಡಿ, ವಿ.ವಿ. ಪುರ ಗ್ರಾಮದ ಜೈರಾಂ ಠಾಕೂರ್ ಜಮೀನಿನಿಂದ ವಜ್ರ ಸಿದ್ಧಪ್ಪನ ದೇವಸ್ಥಾನಕ್ಕೆ ಸೇರುವ ರಸ್ತೆವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು (ಅಂದಾಜು ಮೊತ್ತ ರೂ.9.50 ಲಕ್ಷಗಳು) ಕಾನೂನು ಬಾಹಿರವಾಗಿ ಅನುಷ್ಠಾನಗೂಳಿಸುವಲ್ಲಿ ಶ್ರೀಮತಿ ಶ್ರೀಮತಿ ಎಸ್. ಅನಿಲಮ್ಮರವರು ಭಾಗಿಯಾಗಿರುವ ಬಗ್ಗೆ ಶ್ರೀ ಎಸ್.ಆರ್. ಚಿಕ್ಕನಗೌಡ ಬಿನ್ ಸಿ.ಜಿ. ರಾಜಶೇಖರಪ್ಪ, ಗ್ರಾಮ ಪಂಚಾಯತಿ ಸದಸ್ಯರು, ರಾಗಿಮುಸಲವಾಡ ಗ್ರಾಮದವರು ನೀಡಿರುವ ದೂರಿನ ಬಗ್ಗೆ ಓಂಬುಡ್ಸ್ ಮನ್, ಜಿಲ್ಲಾ ಪಂಚಾಯತಿ, ಚಿತ್ರದುರ್ಗರವರು ಪರಿಶೀಲಿಸಿ, ವಿ.ವಿ. ಪುರ ಗ್ರಾಮದ ಜೈರಾಂ ಠಾಕೂರು ಜಮೀನಿನಿಂದ ವಜ್ರ ಸಿದ್ದಪ್ಪನ ದೇವಸ್ಥಾನಕ್ಕೆ ಸೇರಿರುವ ರಸ್ತೆವರೆಗಿನ ರಸ್ತೆ ಅಭಿವೃದ್ಧಿ ಕಾಮಗಾರಿಯು ಅನುಷ್ಠಾನಕ್ಕೆ

ಸಂಬಂಧಿಸಿದಂತೆ, ಕ್ರಿಯಾ ಯೋಜನೆಗೆ ಅನುಮೋದನೆ ಪಡೆದಿರುವುದಿಲ್ಲ. ಈ ಕಾಮಗಾರಿಯು ಅರಣ್ಯ ಇಲಾಖೆಯ ಅನುಮತಿ ಪಡೆದಿರುವುದಿಲ್ಲ ಎಂಬುದಾಗಿ, ವರದಿ ಮಾಡಿರುತ್ತಾರೆ.

ಈ ಹಿನ್ನಲೆಯಲ್ಲಿ, ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲ್ಲೂಕು, ವಿ.ವಿ.ಪುರ ಗ್ರಾಮ ಪಂಚಾಯತಿ ಹಿಂದಿನ ಅಧ್ಯಕ್ಷರಾದ ಎಸ್.ಅನಿಲಮ್ಮರವರ ವಿರುದ್ಧ ಇರುವ ದೂರಿನ ಸಂಬಂಧ ದಿನಾಂಕ:17.07.2019ರಂದು ಸದರಿರವರಿಗೆ ಕಾರಣ ಕೇಳಿ ನೋಟೀಸ್ ನೀಡಿ ಲಿಖಿತ ಹೇಳಿಕೆ ನೀಡುವಂತೆ ಸೂಚಿಸಲಾಗಿರುತ್ತದೆ. ಸದರಿ ನೋಟೀಸ್‌ಗೆ ಯಾವುದೇ ಸಮಜಾಯಿಸಿಯನ್ನು ನೀಡಿರುವುದಿಲ್ಲ. ನಂತರ ದಿನಾಂಕ:18.10.2019ರಂದು ಎಸ್.ಅನಿಲಮ್ಮ ರವರಿಗೆ ನೋಟೀಸ್ ಕನೀಡಿ ಖುದ್ದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿರುತ್ತದೆ. ಎಸ್.ಅನಿಲಮ್ಮರವರು ಸದರಿ ವಿಚಾರಣೆಗೆ ಹಾಜರಾಗಿರುವುದಿಲ್ಲ. ಜೊತೆಗೆ ಅವರ ಮೇಲಿರುವ ದೂರಿಗೆ ಸಂಬಂಧಿಸಿದಂತೆ ಲಿಖಿತ ಹೇಳಿಕೆಯನ್ನು ಸಹಾ ನೀಡಿರುವುದಿಲ್ಲ. 2018-19ನೇ ಸಾಲಿನ ನರೇಗಾ ಯೋಜನೆಯಡಿ ವಿ.ವಿ.ಪುರ ಗ್ರಾಮದ ಜೈರಾಂ ಠಾಕೂರ್ ಜಮೀನಿನಿಂದ ವಜ್ರ ಸಿದ್ದಪ್ಪನ ದೇವಸ್ಥಾನಕ್ಕೆ ಸೇರುವ ರಸ್ತೆವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಓಂಬುಡ್ಸ್ ಮನ್, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ರವರು ಪರಿಶೀಲಿಸಿ ಸದರಿ ಕಾಮಗಾರಿಯು ಕಳಪೆ ಕಾಮಗಾರಿಯಾಗಿದ್ದು ಸದರಿ ಕಾಮಗಾರಿಯ ಅನುಷ್ಟಾನಕ್ಕೆ ಸಂಬಂಧಿಸಿದಂತೆ ಕ್ರಿಯಾಯೋಜನೆಗೆ ಅನುಮೋದನೆ ಪಡೆದಿರುವುದಿಲ್ಲ. ಈ ಕಾಮಗಾರಿಯು ಅರಣ್ಯ ಇಲಾಖೆ ವ್ಯಾಪ್ತಿಗೆ ಸೇರಿದ ಪ್ರದೇಶವಾಗಿದ್ದು, ಅರಣ್ಯ ಇಲಾಖೆಯ ಅನುಮತಿ ಪಡೆದಿರುವುದಿಲ್ಲ ಈ ಕಾಮಗಾರಿಯನ್ನು ಅನುಷ್ಟಾನಗೊಳಿಸುವಲ್ಲಿ ಎಸ್.ಅನಿಲಮ್ಮರವರು ಭಾಗಿಯಾಗಿರುವ ಬಗ್ಗೆ ವರದಿ ಮಾಡಿರುವುದರಿಂದ ಎಸ್.ಅನಿಲಮ್ಮರವರು ಈ ದೂರಿನ ಬಗ್ಗೆ ವಿಚಾರಣೆಗೆ ಹಾಜರಾಗದೆ ಯಾವ ಸಮಜಾಯಿಷಿಯನ್ನು ನೀಡಿಲ್ಲ. ಓಂಬುಡ್ಸ್‌ಮನ್ ರವರ ವರದಿಯಂತೆ ಸರ್ಕಾರಿ ಅನುದಾನ ದುರ್ಬಳಕೆ, ಕರ್ತವ್ಯ ಲೋಪ ಮಾಡಿರುವುದು ದೃಡಪಟ್ಟಿರುತ್ತದೆ. ಆದ ಕಾರಣ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4), 48(5)ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣೆ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಎಸ್. ಅನಿಲಮ್ಮ, ಹಿಂದಿನ ಅಧ್ಯಕ್ಷರು, ವಿ.ವಿ ಪುರ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1087 ಗ್ರಾಪಂಅ 2019 ಬೆಂಗಳೂರು, ದಿನಾಂಕ:03.01.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಎಸ್. ಅನಿಲಮ್ಮ, ಹಿಂದಿನ ಅಧ್ಯಕ್ಷರು, ವಿ.ವಿ ಪುರ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರು 2018-19ನೇ ಸಾಲಿನ ನರೇಗಾ ಯೋಜನೆಯಡಿ, ವಿ.ವಿ. ಪುರ ಗ್ರಾಮದ ಜೈರಾಂ ಠಾಕೂರ್ ಜಮೀನಿನಿಂದ ವಜ್ರ ಸಿದ್ಧಪ್ಪನ ದೇವಸ್ಥಾನಕ್ಕೆ ಸೇರುವ ರಸ್ತೆವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು (ಅಂದಾಜು ಮೊತ್ತ ರೂ.9.50 ಲಕ್ಷಗಳು) ಕಾನೂನು ಬಾಹಿರವಾಗಿ ಅನುಷ್ಠಾನಗೊಳಿಸುವಲ್ಲಿ ಭಾಗಿಯಾಗಿರುವುದರಿಂದ ಕರ್ತವ್ಯ ನಿರ್ಲಕ್ಷ್ಯತೆ ಹಾಗೂ ದುರ್ನಡತೆ ಮತ್ತು ಅಧಿಕಾರ ದುರುಪಯೋಗ ಮಾಡಿರುವ ಆಪಾದನೆ ಸಾಬೀತಾಗಿರುತ್ತದೆ. ಆದುದರಿಂದ ಶ್ರೀಮತಿ ಎಸ್. ಅನಿಲಮ್ಮ, ಹಿಂದಿನ ಅಧ್ಯಕ್ಷರು, ವಿ.ವಿ ಪುರ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರನ್ನು ಕರ್ನಾಟಕ

ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ) ರನ್ವಯ ವಿ.ವಿ.ಪುರ ಗ್ರಾಮ ಪಂಚಾಯತಿಯ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಮೇಶ್ ಡಿ.ಓ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹಚ್. ರಸ್ತೆ, ಬೆಂಗಳೂರು.
2) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹಿರಿಯೂರು, ಚಿತ್ರದುರ್ಗ ಜಿಲ್ಲೆ. **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹಿರಿಯೂರು, ಚಿತ್ರದುರ್ಗ ಜಿಲ್ಲೆ ಇವರ ಮುಖಾಂತರ)**
5) ಶ್ರೀಮತಿ ಎಸ್. ಅನಿಲಮ್ಮ, ಹಿಂದಿನ ಅಧ್ಯಕ್ಷರು, ವಿ.ವಿ ಪುರ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
6) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಿ.ವಿ. ಪುರ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.